ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಸೋಮವಾರ, ದಿನಾಂಕ : 01 ನೇ ಫೆಬ್ರುವರಿ, 2021

ತ್ಯಾಜ್ಯ ಮತ್ತು ಬ್ಯಾಟರಿಗಳನ್ನು ಸುಡುವಿಕೆಯಿಂದ ಆಗುತ್ತಿರುವ ಪರಿಸರ ಮಾಲಿನ್ಯ ಕುರಿತು

ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮ ನಿರ್ದೇಶನ ಹೊಂದಿದವರು):-

139 (97) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿನ ಕೆಲವೊಂದು ಕೈಗಾರಿಕೆಗಳು ತ್ಯಾಜ್ಯ ಮತ್ತು ಬ್ಯಾಟರಿಗಳನ್ನು ಸುಡುವ ಮೂಲಕ ಕೆಲವೊಂದು ಲೋಹಗಳನ್ನು ಹೊರತೆಗೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಮತ್ತು ಇಂತಹ ಕೃತ್ಯಗಳಿಂದ ಪರಿಸರ ಮಾಲಿನ್ಯವಾಗುತ್ತಿರುವುದಲ್ಲದೆ, ಜನರಲ್ಲಿ ಮಾರಣಾಂತಿಕ ಕಾಯಿಲೆಯಾದ ಶ್ವಾಸಕೋಶದ ಕ್ಯಾನ್ಸರ್ ಹೆಚ್ಚಾಗುತ್ತಿರುವುದು ನಿಜವೇ ;

(ಆ) ಹಾಗಿದ್ದಲ್ಲಿ, ಇಂತಹ ಕೃತ್ಯಗಳನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿ ಪ್ರತಿವರ್ಷ ಉತ್ಪನ್ನವಾಗುವ e-waste ಪ್ರಮಾಣ ಎಷ್ಟು ; ಈ e-waste ನಲ್ಲಿ ಎಷ್ಟು ಪ್ರಮಾಣದಷ್ಟನ್ನು ಮರುಬಳಕೆ ಮಾಡಲಾಗುತ್ತಿದೆ? (ಜಿಲ್ಲಾವಾರು ಪೂರ್ಣ ಮಾಹಿತಿ ನೀಡುವುದು)